ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಡಿ.ಮಂಜುನಾಥ್ (ಅರಣ್ಯ ಸಚಿವರು): ಮಾನ್ಯ ಅಧ್ಯಕ್ಷರೆ, ಈ ದಿನದ ಲಿಖಿತ ಮೂಲಕ ಉತ್ತರಿಸುವ 40ನೇ ಪಟ್ಟಿಯ 46 ಪ್ರಶ್ನೆಗಳ ಪೈಕಿ 30 ಪ್ರಶ್ನೆಗಳಿಗೆ ಉತ್ತರಗಳನ್ನು ಮತ್ತು 10ನೇ ನವೆಂಬರ್ 1998ನೇ ದಿನಾಂಕದಂದು ಪ್ರಶ್ನೋತ್ತರ ನಡೆಯದ ಕಾರಣ ಆ ದಿನದ 39ನೇ ಪಟ್ಟಿಯ 15 ಚುಕ್ಕೆ ಪ್ರಶ್ನೆಗಳ ಪೈಕಿ 14 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 37ನೇ ಪಟ್ಟಿಯ 100 ಪ್ರಶ್ನೆಗಳ ಪೈಕಿ 70 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತೇನೆ.

ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಅವಶ್ಯಕತೆ

3030:(4148)

ಶ್ರೀ ಅಶೋಕ್ ಎನ್.ಕಾಟವೆ (ಹುಬ್ಬಳ್ಳಿ) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಶಾಲೆಗಳ ಅವಶ್ಯಕತೆ ಇದೆ? ಅವುಗಳನ್ನು ತೆರೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಹೌದು.

ಆ) 1. 1998-99ನೇ ಸಾಲಿನಲ್ಲಿ ಹುಬ್ಬಳ್ಳಿ ಧಾರವಾಡದ ಮಹಾನಗರದಲ್ಲಿ 8 ಸರ್ಕಾರಿ ಪ್ರಾಥಮಿಕ ಶಾಲೆಗಳ ಅವಶ್ಯಕತೆ ಕಂಡು ಬಂದಿದ್ದು, ಈ 8(ಎಂಟು) ಸ್ಥಳಗಳಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಿದೆ.

2. ಪ್ರೌಢ ಶಾಲೆಗಳ ಸಂಬಂಧದಲ್ಲಿ ಸಹ ಅವಶ್ಯಕತೆ ಇದ್ದರೆ, ಅದರಂತೆ ಪರಿಶೀಲಿಸಲಾಗುವುದು.